ಬೈಲಹೊಂಗಲ ತಾಲ್ಲೂಕಿನ ದೊಡವಾಡ ಗ್ರಾಮದ ಪೊಲೀಸ್ ಠಾಣೆಯ ಕಟ್ಟಡ ಹಾಗೂ ಸಿಬ್ಬಂದಿಗಳಿಗೆ ವಸತಿ ಗೃಹ ಒದಗಿಸುವುದು

2599(3427) ಶ್ರೀ ಕೌಜಲಗಿ ಮಹಂತೇಶ್ ಶಿವಾನಂದ (ಬೈಲಹೊಂಗಲ) : ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ದೊಡವಾಡ ಗ್ರಾಮದಲ್ಲಿರುವ ಪೊಲೀಸ್ ಠಾಣೆಗೆ ಸ್ವತಂತ್ರವಾದ ಕಟ್ಟಡ ಹಾಗೂ ಅಲ್ಲಿನ ಸಿಬ್ಬಂದಿಗೆ ವಸತಿ ಗೃಹಗಳು ಇಲ್ಲದೆ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಬಂದಿದ್ದರೆ, ಠಾಣೆಗೆ ಸ್ವತಂತ್ರವಾದ ಕಟ್ಟಡ ಹಾಗೂ ಸಿಬ್ಬಂದಿಗಳಿಗೆ ವಸತಿ ಗೃಹಗಳನ್ನು ಕಟ್ಟಲು ಯಾವ ಕ್ರಮ ಕೈಗೊಳ್ಳಲಾಗುವುದು?

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಗೃಹ ಸಚಿವರು) :

ಅ) ಬಂದಿರುತ್ತದೆ.

ಆ) ಪೊಲೀಸ್ ಠಾಣಾ ಮತ್ತು ವಸತಿ ಗೃಹಗಳನ್ನು ಕಟ್ಟಲು ನಿವೇಶನವನ್ನು ನೀಡಲು ಬೆಳಗಾವಿ ಜಿಲ್ಲಾಧಿಕಾರಿಯವರನ್ನು ಕೋರಲಾಗಿದೆ. ನಿವೇಶನಗಳು ದೊರಕಿದ ನಂತರ ಕಟ್ಟಡಗಳನ್ನು ಕಟ್ಟಲಾಗುವುದು.

ಬೆಳಗಾವಿ ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಹೊಸದಾಗಿ ಕೆಲಸಗಳನ್ನು ತೆಗೆದುಕೊಳ್ಳುವುದು

2600(3428) ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) : ಮಾನ್ಯ ಗೃಹ ಮತ್ತು ಸಣ್ಣ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಎಷ್ಟು ಹೊಸ ಕೆಲಸಗಳನ್ನು ತೆಗೆದುಕೊಳ್ಳಬೇಕೆಂದು ಉದ್ದೇಶಿಸಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು);

ಆ) ಬೈಲಹೊಂಗಲ ಹಾಗೂ ಸವದತ್ತಿ ತಾಲ್ಲೂಕುಗಳಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಎಷ್ಟು ಕೆಲಸಗಳನ್ನು ತೆಗೆದುಕೊಳ್ಳಲು ಸರ್ವೆ ಮಾಡಲಾಗುತ್ತಿದೆ;

ಇ) ಇಲ್ಲದಿದ್ದಲ್ಲಿ, ಕಾರಣವೇನು; ಹಾಗೂ ಸರ್ವೆ ಮಾಡಲು ಕ್ರಮಕೈಗೊಳ್ಳಲಾಗುವುದೇ?

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಗೃಹ ಮತ್ತು ಸಣ್ಣ ನೀರಾವರಿ ಸಚಿವರು) :

ಅ) ಬೆಳಗಾಂ ಜಿಲ್ಲೆಯಲ್ಲಿ 35 ಹೊಸ ಕೆರೆಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದೆ. ತಾಲ್ಲೂಕುವಾರು ವಿವರ ಈ ಕೆಳಕಂಡಂತಿದೆ.

ತಾಲ್ಲೂಕು	ಕೆಲಸಗಳ ಸಂಖ್ಯೆ	ಅಂದಾಜು ಮೊತ್ತ
1	2	3
ಬೆಳಗಾಂ	2	57.00
ಹುಕ್ಕೇರಿ	5	108.75
ಬೈಲಹೊಂಗಲ್	2	20.00